ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/04/ಇಸಿಎಸ್(1)/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ:19-02-2019

ಸುತ್ತೋಲೆ

ವಿಷಯ: 2019 ರ ಏಪ್ರಿಲ್/ಮೇ ಡಿಪ್ಲೋಮ ಸೆಮಿಸ್ಟರ್ ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ವಿವರಗಳನ್ನು ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್ ನಲ್ಲಿ ಇಂದೀಕರಿಸುವ ಬಗ್ಗೆ

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರಸಕ್ತ ಶೈಕ್ಷಣಿಕ ವರ್ಷದ 2, 4 ಮತ್ತು 6ನೇ ಸೆಮಿಸ್ಟರ್ ತರಗತಿಗಳ ಶೈಕ್ಷಣಿಕ ಅವಧಿಯು ದಿನಾಂಕ: 03-04-2019 ಕ್ಕೆ ಮುಕ್ತಾಯಗೊಳ್ಳಲ್ಲಿದ್ದು, ಮುಂಬರುವ ಸಾರ್ವತ್ರಿಕ ಚುನಾವಣೆಗಳ ದೃಷ್ಟಿಯಿಂದ 2019 ರ ಏಪ್ರಿಲ್/ಮೇ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯ ಥಿಯರಿ ಪರೀಕ್ಷೆಗಳನ್ನು ತಾತ್ಕಾಲಿಕವಾಗಿ ದಿನಾಂಕ:08-04-2019 ರಿಂದ 28-04-2019 ರವರೆಗೆ ಹಾಗೂ ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ:30-04-2019 ರಿಂದ 10-05-2019 ರವರೆಗೆ, ನಿಗದಿಪಡಿಸಲಾಗಿದೆ. ಪ್ರಯುಕ್ತ ಪ್ರಸ್ತುತ ಸೆಮಿಸ್ಟರ್ ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ವಿವರಗಳನ್ನು ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ದಿನಾಂಕ:25-02-2019 ರವರೆಗೆ ಇಂದೀಕರಿಸಿ ಪರೀಕ್ಷಾ ಶುಲ್ಕ ಪಾವತಿ ಮಾಡಿಲ್ಲದ ವಿದ್ಯಾರ್ಥಿಗಳ ಪಟ್ಟಿಯನ್ನು ತರಗತಿಗಳಲ್ಲಿ ಸುತ್ತೋಲಿಸಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಎಲ್ಲಾ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಸಂಸ್ಥೆಗಳು ಬಿಟಿಇಲಿಂಕ್ಸ್ ಆನ್‌ಲೈನ್ ವೆಬ್‌ಪೋರ್ಟಲ್‌ನಲ್ಲಿ ಪ್ರವೇಶ ಪತ್ರಗಳನ್ನು ದಿನಾಂಕ:01-04-2019 ರಿಂದ ಮುದ್ರಿಸಬಹುದಾಗಿದೆ. ಸಂಸ್ಥೆಗಳಲ್ಲಿ ಪ್ರಿನ್ಸಿಪಾಲರು ಬಿಟಿಇಲಿಂಕ್ಸ್ ಆನ್‌ಲೈನ್ ವೆಬ್‌ಪೋರ್ಟಲ್ ಅನ್ನು ತಾವೇ ಸ್ವತ: ಉಪಯೋಗಿಸುವುದರ ಜೊತೆಗೆ ಕನಿಷ್ಠ ಇಬ್ಬರು ಹಿರಿಯ ವಿಭಾಗಾಧಿಕಾರಿಗಳನ್ನು ವೆಬ್‌ಪೋರ್ಟಲ್ ಉಪಯೋಗಿಸಲು ಕಡ್ಡಾಯವಾಗಿ ನಿಯುಕ್ತಿಗೊಳಿಸಲು ತಿಳಿಸಲಾಗಿದೆ.

ಮುಂದುವರೆದು ಪ್ರಸಕ್ತ ಸಾಲಿನ ಎಲ್ಲಾ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ, ಸದರಿ ಶೈಕ್ಷಣಿಕ ವರ್ಷದ ಪಠ್ಯಕ್ರಮವನ್ನು ವಿಶೇಷ ತರಗತಿಗಳನ್ನು ನಡೆಸುವುದೂ ಸೇರಿದಂತೆ ಪಾಠ ಪ್ರವಚನಗಳನ್ನು ನಿಗಧಿತ ಅವಧಿಯಲ್ಲಿ ಪೂರೈಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ:

ಎಲ್ಲಾ ಪಾಲಿಟೆಕ್ನಿಕ್ ಗಳ ಪ್ರಾಚಾರ್ಯರುಗಳಿಗೆ – ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

ಪ್ರತಿ: 1. ಕಂಪ್ಯೂಟರ್ ವಿಭಾಗಕ್ಕೆ
2. ಇಸಿಎಸ್/ಇಎಫ್‌ಎಸ್/ಇಎಪಿ/ಇಆರ್‌ಎಸ್ ವಿಭಾಗಗಳಿಗೆ
3. ಇ ಗವರ್ನೆನ್ಸ್ ವಿಭಾಗಕೆ
4. ಕಾರ್ಯದರ್ಶಿಯವರ ಆಪ್ತ ಶಾಖೆಗೆ